ಗುಲಬರ್ಗಾ ವಿಶ್ವವಿದ್ಯಾಲಯ
ಜ್ಞಾನ ಗಂಗಾ, ಕಲಬುರಗಿ–585 106, ಕರ್ನಾಟಕ

ದೂರವಾಣಿ ಸಂ.: 08472-263202
ಫ್ಯಾಕ್ಸ್: 08472-263206
ಇ–ಮೇಲ್: registrargug@rediffmail.com

ಸಂ. ಗುವಿಕ:ಕುಅಕಾ:2017–18: 27

ದಿನಾಂಕ 29.05.2017

**ಸಭೆಯ ಸೂಚನೆ**

ವಿಷಯ: ಕರ್ನಾಟಕ ರಾಜ್ಯ ಮಹಿಳಾ ವಿಶ್ವವಿದ್ಯಾಲಯಕ್ಕೆ "ಅಕ್ಕಮಹಾದೇವಿ ರಾಜ್ಯ ಮಹಿಳಾ ವಿಶ್ವವಿದ್ಯಾಲಯ"ವೆಂದು ನಾಮಕರಣ ಮಾಡುವ ನಿಮಿತ್ತ ವಿದ್ಯಾರ್ಥಿನಿಯರ ಶೈಕ್ಷಣಿಕ ಮೇಳ ಜರುಗಿಸುವ ಕುರಿತು.

--

ದಿನಾಂಕ 11.07.2017 ರಂದು ವಿಜಯಪುರದಲ್ಲಿರುವ ಕರ್ನಾಟಕ ರಾಜ್ಯ ಮಹಿಳಾ ವಿಶ್ವವಿದ್ಯಾಲಯಕ್ಕೆ ಕರ್ನಾಟಕದ ಘನ ಸರಕಾರವು "ಅಕ್ಕಮಹಾದೇವಿ ರಾಜ್ಯ ಮಹಿಳಾ ವಿಶ್ವವಿದ್ಯಾಲಯ" ಎಂದು ನಾಮಕರಣ ಮಾಡುತ್ತಿರುವ ನಿಮಿತ್ತ, ಸನ್ಮಾನ್ಯ ಮುಖ್ಯಮಂತ್ರಿಗಳ ಘನ ಉಪಸ್ಥಿತಿಯಲ್ಲಿ ಕರ್ನಾಟಕ ಸರ್ಕಾರದ ಉನ್ನತ ಶಿಕ್ಷಣ ಇಲಾಖೆಯು ಅಂದು ವಿಜಯಪುರದಲ್ಲಿ ವಿದ್ಯಾರ್ಥಿನಿಯರ ಶೈಕ್ಷಣಿಕ ಮೇಳವೊಂದನ್ನು ಆಯೋಜಿಸುತ್ತಿದೆ.

ಮಾನ್ಯ ಉನ್ನತ ಶಿಕ್ಷಣ ಸಚಿವರ ನಿರ್ದೇಶನದಂತೆ ಹಾಗೂ ಮಾನ್ಯ ಕುಲಪತಿಗಳ ಸಲಹೆಯಂತೆ, ಸದರಿ ವಿದ್ಯಾರ್ಥಿನಿಯರ ಮೇಳದಲ್ಲಿ ಗುಲಬರ್ಗಾ ವಿಶ್ವವಿದ್ಯಾಲಯದ ಅಧೀನದಲ್ಲಿ ಬರುವ ಮಹಾವಿದ್ಯಾಲಯಗಳ ವಿದ್ಯಾರ್ಥಿನಿಯರು ಭಾಗವಹಿಸುವ ಕುರಿತು ಚರ್ಚಿಸಲು, ದಿನಾಂಕ 30.05.2017 ರಂದು ಬೆಳಿಗ್ಗೆ 11.30 ಗಂಟೆಗೆ ಕಾರ್ಯಸೌಧದ "ರಾಧಾಕೃಷ್ಣ ಸಭಾಂಗಣ"ದಲ್ಲಿ ಎಲ್ಲಾ ಮಹಾವಿದ್ಯಾಲಯಗಳ ಪ್ರಾಂಶುಪಾಲರು ಹಾಗೂ ಎನ್.ಎಸ್.ಎಸ್. ಘಟಕದ ಸಂಯೋಜನಾಧಿಕಾರಿಗಳು/ವಿದ್ಯಾರ್ಥಿ ಕಲ್ಯಾಣಾಧಿಕಾರಿಗಳ ಸಭೆಯನ್ನು ಕರೆಯಲಾಗಿದೆ.

ಆದ್ದರಿಂದ, ಸಂಬಂಧಪಟ್ಟ ಕಾಲೇಜಿನ ಪ್ರಾಂಶುಪಾಲರು ಹಾಗೂ ಎನ್.ಎಸ್.ಎಸ್. ಸಂಯೋಜನಾ ಅಧಿಕಾರಿಗಳು/ವಿದ್ಯಾರ್ಥಿ ಕಲ್ಯಾಣಾಧಿಕಾರಿಗಳು ತಪ್ಪದೇ ಹಾಜರಿರಲು ಕೋರಲಾಗಿದೆ.

29/5/17

ಕುಲಸಚಿವರು
ಗುಲಬರ್ಗಾ ವಿಶ್ವವಿದ್ಯಾಲಯ, ಕಲಬುರಗಿ

ಗೆ,

ಎಲ್ಲಾ ಮಹಾವಿದ್ಯಾಲಯಗಳ ಪ್ರಾಂಶುಪಾಲರು/ಸಂಬಂಧಪಟ್ಟ ಮಹಾವಿದ್ಯಾಲಯದ ಎನ್.ಎಸ್.ಎಸ್. ಸಂಯೋಜನಾಧಿಕಾರಿಗಳು/ವಿದ್ಯಾರ್ಥಿ ಕಲ್ಯಾಣಾಧಿಕಾರಿಗಳು.

ಪ್ರತಿಗಳು:

1. ಕುಲಸಚಿವರು (ಮೌಲ್ಯಮಾಪನ), ಗುಲಬರ್ಗಾ ವಿಶ್ವವಿದ್ಯಾಲಯ, ಕಲಬುರಗಿ.
2. ವಿತ್ತಾಧಿಕಾರಿಗಳು, ಗುಲಬರ್ಗಾ ವಿಶ್ವವಿದ್ಯಾಲಯ, ಕಲಬುರಗಿ.
3. ವಿದ್ಯಾರ್ಥಿ ಕಲ್ಯಾಣಾಧಿಕಾರಿಗಳು, ಗುಲಬರ್ಗಾ ವಿಶ್ವವಿದ್ಯಾಲಯ, ಕಲಬುರಗಿ.
4. ಸಂಯೋಜನಾಧಿಕಾರಿಗಳು, ಎನ್.ಎಸ್.ಎಸ್. ಘಟಕ, ಗುಲಬರ್ಗಾ ವಿಶ್ವವಿದ್ಯಾಲಯ, ಕಲಬುರಗಿ.
5. ಸ್ಥಳೀಯ ಅಭಿಯಂತರರು, ಗುಲಬರ್ಗಾ ವಿಶ್ವವಿದ್ಯಾಲಯ, ಕಲಬುರಗಿ ಇವರಿಗೆ ಸೂಕ್ತ ವ್ಯವಸ್ಥೆಗಾಗಿ.
6. ಕುಲಪತಿಗಳ ಆಪ್ತ ಕಾರ್ಯದರ್ಶಿ, ಗುಲಬರ್ಗಾ ವಿಶ್ವವಿದ್ಯಾಲಯ, ಕಲಬುರಗಿ.